ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಮೈಸೂರು ಕೃಷ್ಣರಾಜೇಂದ್ರ ಆಸ್ಪತ್ರೆಯ ಕಟ್ಟಡ.

7321 - ಶ್ರೀ ಕೆ. ಹರ್ಷಕುಮಾರ ಗೌಡ (ಚಾಮರಾಜ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದ ಕೃಷ್ಣರಾಜೇಂದ್ರ ಆಸ್ಪತ್ರೆಯಲ್ಲಿನ ಅರ್ಧಕ್ಕೆ ನಿಂತಿರುವ ಕಟ್ಟಡ ನಿರ್ಮಾಣವನ್ನು ಯಾವಾಗ ಪೂರೈಸಲಾಗುವುದು?

ಆ) ಮೈಸೂರು ನಗರದ ಪ್ರಸಕ್ತ ಜನಸಂಖ್ಯೆಗೆ ಅನುಗುಣವಾಗಿ ಆಸ್ಪತ್ರೆಯನ್ನು ಸಂಪೂರ್ಣವಾಗಿ ಸಜ್ಜುಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

ಇ) ಆಸ್ಪತ್ರೆಗೆ ಬೇಕಾಗಿರುವಂತ ನೂತನ ಎಕ್ಸ್‌ರೇ, ಹೃದ್ರೋಗಕ್ಕೆ ಬೇಕಾಗುವಂತಹ ಹಾಗೂ ಪತ್ತೆ ಹಚ್ಚುವ ಯಂತ್ರೋಪಕರಣಗಳನ್ನು ಯಾವಾಗ ಸರಬರಾಜು ಮಾಡಲಾಗುವುದು?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ದುರಸ್ತಿ ಕಾಮಗಾರಿಯು ಪ್ರಗತಿಯಲ್ಲಿದೆ. ಬಾಕಿ ಉಳಿದಿರುವ ಕಾಮಗಾರಿಯನ್ನು ಪೂರ್ಣಗೊಳಿಸುವ ವಿಷಯ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಆ) ಮೈಸೂರು ನಗರದ ಜನಸಂಖ್ಯೆಗೆ ಅನುಗುಣವಾಗಿ ಮೈಸೂರು ನಗರದ ಆಸ್ಪತ್ರೆಯಲ್ಲಿ ಈಗಿರುವ ಸೌಲಭ್ಯದಲ್ಲಿ ಸಾರ್ವಜನಿಕರಿಗೆ ಸಾಕಷ್ಟು ಅನುಕೂಲವನ್ನು ಒದಗಿಸಲಾಗುತ್ತಿದೆ. ಆದಾಗ್ಯೂ ಸರ್ಕಾರವು ಇಷ್ಟಕ್ಕೆ ತೃಪ್ತಿಗೊಂಡಿಲ್ಲ. ಹಣದ ಲಭ್ಯತೆಯನ್ನು ಅನುಸರಿಸಿ, ನಗರದಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಅವಶ್ಯಕತೆಗಳನ್ನು ಪೂರೈಸಲಾಗುವುದು.

ಇ) ಹೊಸ ಕ್ಷ-ಕಿರಣ ಯಂತ್ರಗಳನ್ನು ಮತ್ತು ಹೈದ್ರೋಗ ಪತ್ತೆ ಹಚ್ಚಲು ಬೇಕಾಗುವ ಹೆಚ್ಚುವರಿ ಯಂತ್ರೋಪಕರಣಗಳನ್ನು ಒದಗಿಸಲು ಆರ್ಥಿಕ ಅನುಕೂಲತೆಯನ್ನು ನೋಡಿಕೊಂಡು ಕ್ರಮ ತೆಗೆದುಕೊಳ್ಳಲಾಗುವುದು.

ರಾಜ್ಯದಲ್ಲಿರುವ ವೈದ್ಯಕೀಯ ಕಾಲೇಜುಗಳ ಸಂಖ್ಯೆ.

3736 - ಶ್ರೀ ಕೆ. ಹರ್ಷಕುಮಾರಗೌಡ (ಚಾಮರಾಜ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿ ಪ್ರಸಕ್ತ ಇರುವ ಮೆಡಿಕಲ್ ಕಾಲೇಜುಗಳೆಷ್ಟು ಮತ್ತು ಅವುಗಳ ಹೆಸರುಗಳೇನು?

ಆ) ವಿವಿಧ ಮೆಡಿಕಲ್ ಕಾಲೇಜುಗಳಲ್ಲಿ ಪ್ರವೇಶ ಕೊಡಲು ಸರ್ಕಾರ ಅನುಮತಿ ಕೊಟ್ಟಿರುವ ಸಂಖ್ಯೆ ಎಷ್ಟು?

ಇ) ಈ ಮೆಡಿಕಲ್ ಕಾಲೇಜುಗಳಲ್ಲಿ ಸರ್ಕಾರ ಮಂಜೂರು ಮಾಡಿರುವುದಕ್ಕಿಂತ ಮೀರಿ ಪ್ರವೇಶ ಕೊಟ್ಟಿರುವ ಕಾಲೇಜುಗಳ ಹೆಸರುಗಳೇನು?

ಈ) ಹೊಸದಾಗಿ ವೈದ್ಯಕೀಯ ಕಾಲೇಜು ಪ್ರಾರಂಭ ಮಾಡಲು ಅರ್ಜಿ ಸಲ್ಲಿಸಿರುವ ಸಂಸ್ಥೆಗಳ ಹೆಸರುಗಳೇನು? ಇವುಗಳಿಗೆ ಅನುಮತಿ ನೀಡಲು ಸರ್ಕಾರ ಯಾವಾಗ ತೀರ್ಮಾನಿಸಿರುವುದು?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):